# All India Radio: Bangalore
# Regional Bulletin In Kannada
# 20.09.2026 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ನಾಳೆಯಿಂದ ಮೂರು ದಿನ ವಿಧಾನಮಂಡಲದ ವಿಶೇಷ ಅಧಿವೇಶನ: ಕಸ್ತೂರಿ ರಂಗನ್ ವರದಿ, ಬರ ಪರಿಸ್ಥಿತಿ ಕುರಿತು ಚರ್ಚೆ- ಮುಖ್ಯಮಂತ್ರಿ
2. ಕೇಂದ್ರದಿಂದ ನೆರವು ಪಡೆಯಲು ದೆಹಲಿಗೆ ಸರ್ವಪಕ್ಷ ನಿಯೋಗ ಕರೆದೊಯ್ಯಲು ನಿರ್ಧಾರ- ಡಾ. ಜಿ. ಪರಮೇಶ್ವರ್
3. ಆದ್ಯತೆ ಮೇರೆಗೆ ಭದ್ರಾ ಮೇಲ್ದಂಡೆ ಯೋಜನೆ ಪೂರ್ಣಗೊಳಿಸಲು ರಾಜ್ಯ ಸರ್ಕಾರ ಬದ್ಧ- ಸಚಿವ ಚಲುವರಾಯಸ್ವಾಮಿ
4. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ: ಹಲವೆಡೆ ಜನ ಜಾಗೃತಿ ಕಾರ್ಯಕ್ರಮ

<><><><>

ರಾಜ್ಯದಲ್ಲಿ ಉಂಟಾಗಿರುವ ತೀವ್ರ ಬರಪರಿಸ್ಥಿತಿ ಹಾಗೂ ವಿವಾದಾತ್ಮಕ ಕಸ್ತೂರಿ ರಂಗನ್ ವರದಿ ಕುರಿತು ಚರ್ಚಿಸಲು ನಾಳೆಯಿಂದ ಮೂರು ದಿನಗಳ ವಿಧಾನಮಂಡಲದ ವಿಶೇಷ ಅಧಿವೇಶನ ಕರೆಯಲಾಗಿದೆ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ. ಹಾಸನ ಜಿಲ್ಲೆಯ ಸಕಲೇಶಪುರದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಶೇಷ ಅಧಿವೇಶನದಲ್ಲಿ ಅರಣ್ಯ ಪ್ರದೇಶದ ಪಕ್ಕದಲ್ಲಿ ವಾಸಿಸುವ ಜನರ ಪರಿಸ್ಥಿತಿ ಬಗ್ಗೆ ಚರ್ಚೆ ನಡೆಸಿ ಅತೀ ಶೀಘ್ರವಾಗಿ ಕೇಂದ್ರಕ್ಕೆ ನಮ್ಮ ಅಭಿಪ್ರಾಯ ತಿಳಿಸಲಾಗುವುದು ಎಂದರು. ಈ ಹಿಂದೆ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿದ್ದ ವೇಳೆ ಕಸ್ತೂರಿ ರಂಗನ್ ವರದಿಯನ್ನು ವಿರೋಧಿಸಲಾಗಿತ್ತು. ಕಳೆದ ಅಧಿವೇಶನದಲ್ಲಿ ಚರ್ಚೆ ನಡೆಸಬೇಕಿತ್ತು ಆದರೆ ವಿರೋಧ ಪಕ್ಷದ ಶಾಸಕರು ತಮ್ಮ ರಾಜಕಾರಣಕ್ಕಾಗಿ ವಿಧಾನಸಭೆಯ ಸಮಯ ವ್ಯರ್ಥ ಮಾಡಿದ್ದಾರೆ ಎಂದು ಟೀಕಿಸಿದರು. ಹಾಸನ, ಮೈಸೂರು, ಕೊಡಗು, ಚಿಕ್ಕಮಗಳೂರು, ಕಾರವಾರ ಸೇರಿದಂತೆ ಮಲೆನಾಡು ಭಾಗದ ಸಚಿವರು, ಸಂಸದರು, ಶಾಸಕರ ಜೊತೆ ಚರ್ಚಿಸಿ ಅವರ ಅಭಿಪ್ರಾಯ ಸಂಗ್ರಹಿಸಿ, ಕಸ್ತೂರಿ ರಂಗನ್ ವರದಿಯಿಂದ ಜನರ ಬದುಕಿನ ಮೇಲೆ ಬೀರುವ ಪರಿಣಾಮದ ಬಗ್ಗೆ ಕೇಂದ್ರಕ್ಕೆ ವರದಿ ನೀಡಲಾಗುವುದು ಎಂದರು.

<><><><>

ಬರ ಪರಿಹಾರ ಮತ್ತು ರೈತರ ಸಾಲ ಮನ್ನಾ ವಿಷಯದಲ್ಲಿ ಕೇಂದ್ರ ಸರ್ಕಾರದ ನೆರವು ಪಡೆಯಲು ವಿರೋಧ ಪಕ್ಷಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸರ್ವಪಕ್ಷ ನಿಯೋಗವನ್ನು ದೆಹಲಿಗೆ ಕರೆದೊಯ್ಯಲು ಸರ್ಕಾರ ನಿರ್ಧರಿಸಿದೆ ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಪರಿಸ್ಥಿತಿ ಮತ್ತು ಮಲೆನಾಡು ಭಾಗದಲ್ಲಿ ಆತಂಕ ಮೂಡಿಸಿರುವ ಕಸ್ತೂರಿ ರಂಗನ್ ವರದಿ ಕುರಿತು ಅಧಿವೇಶನದಲ್ಲಿ ಸಮಗ್ರವಾಗಿ ಚರ್ಚಿಸಿ, ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

<><><><>

ನಾಳೆಯಿಂದ ಮೂರು ದಿನ ನಡೆಯಲಿರುವ ವಿಶೇಷ ಅಧಿವೇಶನವನ್ನು ಸುಗಮ ಮತ್ತು ಅರ್ಥಪೂರ್ಣವಾಗಿ ನಡೆಸಲು ಸಹಕರಿಸುವಂತೆ ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ವಿರೋಧ ಪಕ್ಷದ ನಾಯಕರಿಗೆ ಮನವಿ ಮಾಡಿದ್ದಾರೆ. ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್ ಬಾಬು ಮತ್ತು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರಿಗೆ ಪತ್ರ ಬರೆದಿರುವ ಸಚಿವರು, ಈ ಎರಡು ಸೂಕ್ಷ್ಮ ವಿಷಯಗಳ ಬಗ್ಗೆ ಪಕ್ಷಾತೀತವಾಗಿ, ವಾಸ್ತವಾಂಶ, ಅಂಕಿಅಂಶ, ತಜ್ಞರ ಅಭಿಪ್ರಾಯ ಮತ್ತು ಜನರ ಹಿತಾಸಕ್ತಿ ಆಧರಿಸಿ ಚರ್ಚೆ ನಡೆದು ಕೇಂದ್ರಕ್ಕೆ ರಾಜ್ಯದ ನಿಲುವು ತಿಳಿಸುವ ಅಗತ್ಯವಿದೆ ಎಂದಿದ್ದಾರೆ.

<><><><>

ಬಹುನಿರೀಕ್ಷಿತ ಭದ್ರಾ ಮೇಲ್ದಂಡೆ ಯೋಜನೆಯನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಹಿರಿಯೂರು ತಾಲ್ಲೂಕಿನ ಆದಿರಾಳು ಗ್ರಾಮದ ಬಳಿ ಭದ್ರಾ ನದಿಗೆ ಬಾಗಿನ ಅರ್ಪಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರುವ ನವೆಂಬರ್ ಅಥವಾ ಡಿಸೆಂಬರ್ ವೇಳೆಗೆ ಯೋಜನೆಯ ವ್ಯಾಪ್ತಿಯಲ್ಲಿ ೧೭ ಟಿಎಂಸಿ ನೀರನ್ನು ಲಿಫ್ಟ್ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ಹೇಳಿದರು. ಯೋಜನೆ ಅನುಷ್ಠಾನದಲ್ಲಿ ಆರ್ಥಿಕ ಅಥವಾ ಅರಣ್ಯ ಇಲಾಖೆಗೆ ಸಂಬಂಧಿಸಿದ ಯಾವುದೇ ತೊಡಕುಗಳು ಎದುರಾದರೂ ಅವುಗಳನ್ನು ಪರಿಹರಿಸಿ, ೧೭ ಟಿಎಂಸಿ ನೀರನ್ನು ಲಿಫ್ಟ್ ಮಾಡುವ ಕಾರ್ಯವನ್ನು ತಡೆರಹಿತವಾಗಿ ಮುಂದುವರಿಸಲಾಗುವುದು ಎಂದು ಸಚಿವ ಎನ್.ಚಲುವರಾಯಸ್ವಾಮಿ ಸ್ಪಷ್ಟಪಡಿಸಿದರು.

<><><>

ಗದಗ ತಾಲೂಕನ್ನು ಬರ ಪೀಡಿತ ತಾಲೂಕು ಎಂದು ಸರ್ಕಾರ ಘೋಷಿಸದಿದ್ದರೆ, ಅಕ್ಟೋಬರ್ ೧೦ ರಂದು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ರೈತರ ಪರ ನಿಲ್ಲುವುದಾಗಿ ಶಾಸಕ ಎಚ್.ಕೆ.ಪಾಟೀಲ್ ಹೇಳಿದ್ದಾರೆ. ಗದಗ ತಾಲ್ಲೂಕಿನ ಮುಳಗುಂದದಲ್ಲಿಂದು ರೈತರನ್ನು ಉದ್ದೇಶಿಸಿ ಮಾತನಾಡಿದ ಅವರು, ಜಿಲ್ಲೆಯ ಬರಗಾಲದ ಕುರಿತು ಮುಖ್ಯಮಂತ್ರಿಯವರು ಪರಿಶೀಲಿಸಿದ್ದರೂ, ಬರಗಾಲ ತಾಲೂಕು ಎಂದು ಘೋಷಿಸುವಲ್ಲಿ ನಿರ್ಲಕ್ಷ್ಯ ವಹಿಸಲಾಗಿದೆ ಎಂದು ಟೀಕಿಸಿದರು. ಈ ಸಂಬಂಧ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಪತ್ರ ಬರೆದಿರುವುದಾಗಿ ಎಚ್.ಕೆ.ಪಾಟೀಲ್ ತಿಳಿಸಿದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಮತ್ತು ವಿಶೇಷ ಅಭಿಯಾನದ ಅಂಗವಾಗಿ ಇಂದು ಆಯೋಜಿಸಿದ್ದ ಜಾಗೃತಿ ಜಾಥಾಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ವಾಸಂತಿ ಅಮರ್ ಚಾಲನೆ ನೀಡಿದರು. ಬಳಿಕ ಅವರು ಮಾತನಾಡಿ, ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸುವುದು ಮತ್ತು ಪರಿಷ್ಕರಣೆ ಬಗ್ಗೆ ನಿಗದಿತ ನಮೂನೆಗಳನ್ನು ಸಲ್ಲಿಸಿ ಹೆಸರು ಸೇರ್ಪಡೆ ಮಾಡಬಹುದಾಗಿದೆ ಎಂದರು. ಕೋಲಾರದಲ್ಲಿಂದು ಆಯೋಜಿಸಿದ್ದ 'ಜಾಗೃತಿ ಜಾಥಾ' ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಕರಡು ಪಟ್ಟಿಯಲ್ಲಿ ಅರ್ಹ ಮತದಾರರ ಹೆಸರು ಬಿಟ್ಟುಹೋಗಿದ್ದಲ್ಲಿ, ನಿಗದಿತ ಪ್ರಕ್ರಿಯೆಯಂತೆ ಮರು ಸೇರ್ಪಡೆಗಾಗಿ ಅರ್ಜಿ ಸಲ್ಲಿಸಲು ಅವಕಾಶವಿದೆ. ೧೮ ವರ್ಷ ಪೂರ್ಣಗೊಂಡಿರುವ ಯುವಜನರು ಹೊಸ ಮತದಾರರಾಗಿ ನೋಂದಾಯಿಸಿಕೊಳ್ಳುವಂತೆಯೂ ಸಾರ್ವಜನಿಕರಲ್ಲಿ ಮನವಿ ಮಾಡಿದರು. ಕೊಡಗು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಎಸ್ ಜೆ ಸೋಮಶೇಖರ್ ವಿವಿಧ ಮತಗಟ್ಟೆಗೆ ಭಾನುವಾರ ಭೇಟಿ ನೀಡಿ ಪರಿಶೀಲಿಸಿ, ಮಾಹಿತಿ ಪಡೆದರು. ಅಭಿಯಾನಕ್ಕೆ ಜಿಲ್ಲೆಯಲ್ಲಿ ಉತ್ತಮ ಸ್ಪಂದನೆ ದೊರೆತಿದೆ ಎಂದು ಅವರು ತಿಳಿಸಿದರು.

<><><>

ಗದಗದಲ್ಲಿಂದು ಆಯೋಜಿಸಿದ್ದ ೯ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆ ಕಾರ್ಯಕ್ರಮಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಮಣ್ಣೂರ ಚಾಲನೆ ನೀಡಿದರು. ಪ್ರತಿ ವರ್ಷದಂತೆ ಈ ವರ್ಷವೂ ಜಿಲ್ಲೆಯಾದ್ಯಂತ ಎಲ್ಲ ಅಂಗನವಾಡಿ ಕೇಂದ್ರಗಳಲ್ಲಿ ಈ ಕಾರ್ಯಕ್ರಮವನ್ನು ಆಚರಿಸಲಾಯಿತು. "ನಮ್ಮ ಅಂಗನವಾಡಿ, ನಮ್ಮ ಜವಾಬ್ದಾರಿ ಈ ಸಾಲಿನ ಪೋಷಣ್ ಮಾಸಾಚರಣೆಯ ಘೋಷ ವಾಕ್ಯವಾಕ್ಯವಾಗಿದೆ. ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುಳಾ ಮಾತನಾಡಿ, ಅಂಗನವಾಡಿ ಕೇಂದ್ರಗಳ ಅಭಿವೃದ್ಧಿ, ನಿರ್ವಹಣೆ ಕೇವಲ ಸರ್ಕಾರದ ಜವಾಬ್ದಾರಿ ಅಲ್ಲ ಇಡೀ ಸಮುದಾಯದ ಜವಾಬ್ದಾರಿಯಾಗಿದೆ ಎಂದು ಹೇಳಿದರು.

<><><>

ಕಸ್ತೂರಿ ರಂಗನ್ ವರದಿ ವಿರೋಧಿಸಿ ನಾಳೆ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಪಟ್ಟಣ ಬಂದ್‌ಗೆ ವಿವಿಧ ಸಂಘಟನೆಗಳು ಕರೆ ನೀಡಿವೆ. ಬಂದ್‌ಗೆ ರೈತ ಸಂಘಟನೆಗಳು, ರಾಜಕೀಯ ಪಕ್ಷಗಳು, ರೈತ ಮುಖಂಡರು ಕಾಫಿ ಬೆಳೆಗಾರರ ಸಂಘಟನೆಗಳು ಬೆಂಬಲ ನೀಡಿದ್ದು, ನಾಳೆ ಮುಂಜಾನೆ ೬ ರಿಂದ ಸಂಜೆ ೬ ಗಂಟೆವರೆಗೆ ಅಂಗಡಿ ಮುಂಗಟ್ಟುಗಳನ್ನು ಮುಚ್ಚಿ ಬಂದ್ ಮಾಡಲಾಗುವುದು ಎಂದು ರೈತ ಸಂಘಟನೆಗಳು ತಿಳಿಸಿವೆ.

<><><><>

ಅಭಿವೃದ್ಧಿ ಕಾಮಗಾರಿಗಳ ವಿಚಾರದಲ್ಲಿ ಅಧಿಕಾರಿಗಳು ಪಾರದರ್ಶಕತೆ ಕಾಯ್ದುಕೊಳ್ಳಬೇಕು ಎಂದು ಕೋಲಾರ ಶಾಸಕ ಡಾ.ಕೊತ್ತೂರು ಜಿ. ಮಂಜುನಾಥ್ ಹೇಳಿದ್ದಾರೆ. ನಗರಸಭೆಯ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಒಳ ಚರಂಡಿ ಮಾರ್ಗ ಸೇರಿದಂತೆ ಯಾವುದೇ ಕಾಮಗಾರಿಗಳ ಅಂದಾಜು ಪಟ್ಟಿ ಮತ್ತು ಪ್ರಗತಿಯ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸಬೇಕು ಎಂದು ಸೂಚಿಸಿದರು. ಜಿಲ್ಲಾಧಿಕಾರಿ ಎಂ.ಆರ್. ರವಿಕುಮಾರ್ ಮಾತನಾಡಿ, ಯಾವುದೇ ಕಾಮಗಾರಿ ಪ್ರಾರಂಭಿಸುವ ಮುನ್ನ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಉಸ್ತುವಾರಿ ಸಚಿವರ ಗಮನಕ್ಕೆ ತರುವುದು ಕಡ್ಡಾಯ ಎಂದು ಅವರು ಸ್ಪಷ್ಟಪಡಿಸಿದರು. ಸುಪ್ರೀಂ ಕೋರ್ಟ್ ಹಾಗೂ ಹೈಕೋರ್ಟ್ ಆದೇಶಗಳ ಅನ್ವಯ, ಖಾಲಿ ನಿವೇಶನಗಳನ್ನು ಮಾಲೀಕರೆ ಸ್ವತಃ ತ್ವರಿತವಾಗಿ ಸ್ವಚ್ಛಗೊಳಿಸಿಕೊಳ್ಳಬೇಕು. ಒಂದು ವೇಳೆ ತಪ್ಪಿದಲ್ಲಿ, ನಗರಸಭೆಯಿಂದಲೇ ಆ ಕಾರ್ಯವನ್ನು ನಡೆಸಿ, ಅದಕ್ಕೆ ತಗಲುವ ವೆಚ್ಚದ ಜೊತೆಗೆ ೨ ಸಾವಿರದಿಂದ ೩ ಸಾವಿರ ರೂಪಾಯಿಗಳವರೆಗೆ ದಂಡ ವಿಧಿಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

<><><><>

ಇನ್ನು ಹವಾವರ್ತಮಾನ,

ರಾಜ್ಯದ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿದ್ದು, ಕರಾವಳಿ ಭಾಗದಲ್ಲಿ ದುರ್ಬಲವಾಗಿತ್ತು. ಕೆಲವೆಡೆ ಮಳೆಯಾಗಿದೆ. ಬೆಂಗಳೂರು ಕೆಐಎಎಲ್ ವೀಕ್ಷಣಾಲಯದಲ್ಲಿ ೬, ಎಚ್ಎಎಲ್ ವಿಮಾನ ನಿಲ್ದಾಣ, ಹೊಸಕೋಟೆಯಲ್ಲಿ ೭ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ಮೂರು ದಿನಗಳ ಕಾಲ ರಾಜ್ಯಾದ್ಯಂತ ಹವಾಮಾನದಲ್ಲಿ ಗಮನಾರ್ಹ ಬದಲಾವಣೆ ಇಲ್ಲ. ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣವಿರಲಿದ್ದು, ಕೆಲವು ಕಡೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೨೮ ಹಾಗೂ ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>